ಗಾರ್ಮೆಂಟ್ಸ್ ಕಾರ್ಮಿಕರ ಯೋಗಕ್ಷೇಮ

862 (1480) ಶ್ರೀ. ಹ್ಯಾರೀಸ್ ಎನ್.ಎ (ಶಾಂತಿನಗರ) : ಮಾನ್ಯ ಕಾರ್ಮಿಕ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೃಹತ್ ಬೆಂಗಳೂರು ಮಹಾನಗರ ವ್ಯಾಪ್ತಿಯಲ್ಲಿ ಬರುವ ಅಧಿಕೃತ ಮತ್ತು ಅನಧಿಕೃತ ಗಾರ್ಮೆಂಟ್ಸ್ ಘಟಕಗಳೆಷ್ಟು; ಅವುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಕಾರ್ಮಿಕರ ಸಂಖ್ಯೆ ಎಷ್ಟು? ಮಹಿಳಾ ಕಾರ್ಮಿಕರ ಸಂಖ್ಯೆ ಎಷ್ಟು?

ಆ) ಗಾರ್ಮೆಂಟ್ಸ್ ಘಟಕಗಳಲ್ಲಿ ಕಳೆದ ಎರಡು ವರ್ಷಗಳ ಅವಧಿಯಲ್ಲಿ ದಾಖಲಿಸಿಕೊಂಡ ವಿವಿಧ ದೂರುಗಳ ಸಂಖ್ಯೆ ಮತ್ತು ಕೈಗೊಂಡ ಕ್ರಮಗಳ ವಿವರಗಳೇನು?

ಇ) ಬಡ ಕಾರ್ಮಿಕರುಗಳ ಯೋಗ ಕ್ಷೇಮದ ಬಗ್ಗೆ ಸರ್ಕಾರ ಕೈಗೊಂಡ ಯೋಜನೆಗಳೇನು;

ಶ್ರೀ ಬಿ.ಎನ್. ಬಚ್ಚೇಗೌಡ (ಕಾರ್ಮಿಕ ಸಚಿವರು) :

ಅ)

- ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿ ಅಡಿಯಲ್ಲಿ 710 ಗಾರ್ಮೆಂಟ್ ಕಾರ್ಖಾನೆಗಳು ನೋಂದಾವಣೆಗೊಂಡಿರುತ್ತವೆ.
- ಆದರೆ ಅನಧಿಕೃತ ಗಾರ್ಮೆಂಟ್ ಘಟಕಗಳ ಮಾಹಿತಿ ಲಭ್ಯವಿರುವುದಿಲ್ಲ.
- ನೋಂದಾಯಿತ ಕಾರ್ಖಾನೆಗಳಲ್ಲಿ ಪಟ್ಟು ಎರಡು ಲಕ್ಷ ಎಂಭತ್ತು ಸಾವಿರ ಕಾರ್ಮಿಕರು ಕಾರ್ಯನಿರ್ವಹಿಸುತ್ತಿದ್ದಾರೆ.
- ಇಂತಹ ಕಾರ್ಖಾನೆಗಳಲ್ಲಿ ಸುಮಾರು ಎರಡು ಲಕ್ಷ ಮಹಿಳಾ ಕಾರ್ಮಿಕರು ಇರುತ್ತಾರೆ.

ಆ)

- ನೋಂದಾವಣೆಗೊಂಡಿರುವ ಗಾರ್ಮೆಂಟ್ಸ್ ಘಟಕಗಳಿಗೆ ಸಂಬಂಧಿಸಿದಂತೆ ಕಳೆದ ಎರಡು ವರ್ಷಗಳಲ್ಲಿ 21 ದೂರುಗಳು ದಾಖಲಾಗಿರುತ್ತವೆ.

- ಕಾರ್ಖಾನೆಗಳು, ಬಾಯ್ಲರುಗಳು, ಕೈಗಾರಿಕಾ ಸುರಕ್ಷತೆ ಮತ್ತು ಸ್ವಾಸ್ಥ್ಯ ಇಲಾಖೆಯು ಎಲ್ಲಾ ದೂರುಗಳನ್ನು ಕಾನೂನು ರೀತಿ ಈಗಾಗಲೇ ಇತ್ಯರ್ಥಗೊಳಿಸಿರುತ್ತದೆ.
- ಆರು ಪ್ರಕರಣಗಳಲ್ಲಿ ಮೊಕದ್ದಮೆ ದಾಖಲು ಮಾಡುವ ಮುಖೇನ ಕ್ರಮ ಕೈಗೊಂಡಿದೆ.

ಇ) ಗಾರ್ಮೆಂಟ್ ಕಾರ್ಖಾನೆಗಳಲ್ಲಿ ಕಾರ್ಯನಿರ್ವಹಿಸುವ ಬಹುತೇಕ ಕಾರ್ಮಿಕರು ಮಾಹೆಯಾನ ರೂ.10,000/– ಕ್ಕಿಂತ ಕಡಿಮೆ ವೇತನ ಪಡೆಯುತ್ತಿದ್ದು, ಈ ಎಲ್ಲಾ ಕಾರ್ಮಿಕರು ಇ.ಎಸ್.ಐ ಯೋಜನೆಗೆ ಒಳಪಟ್ಟಿರುತ್ತಾರೆ. ಅವರಿಗೆ ಮತ್ತು ಅವರ ಕುಟುಂಬ ವರ್ಗಕ್ಕೆ ಆರೋಗ್ಯ ರಕ್ಷಣೆಯನ್ನು ಇಎಸ್ಐ ಒದಗಿಸುತ್ತದೆ. ಅಲ್ಲದೆ 500 ಜನ ಕಾರ್ಮಿಕರಿಗಿಂತ ಹೆಚ್ಚಿನ ಕಾರ್ಮಿಕರನ್ನು ನೇಮಿಸಿಕೊಂಡಿರುವ ಕಾರ್ಖಾನೆಗಳಲ್ಲಿ ಕಾರ್ಖಾನೆಗಳ ಕಾಯ್ದೆ 1948ರ ಅಡಿಯಲ್ಲಿ ಆರೋಗ್ಯ ಸೌಲಭ್ಯ ಒದಗಿಸಲಾಗುತ್ತಿದೆ. ಕಾರ್ಮಿಕರ ಹಿತ ಕಾಪಾಡುವ ದೃಷ್ಟಿಯಿಂದ ಸರ್ಕಾರ ಕಳೆದ ಎರಡೂವರೆ ವರ್ಷಗಳಿಂದ ಮಹಿಳಾ ಹಕ್ಕು ತರಬೇತಿ ಮತ್ತು ಸುರಕ್ಷತಾ ಉಸ್ತುವಾರಿ ಕೇಂದ್ರ ಎಂಬ ಯೋಜನೆ ಅಡಿ ಹಲವಾರು ಕಾನೂನು ಅರಿವು ಕಾರ್ಯಕ್ರಮ ಗಳನ್ನು ಹಮ್ಮಿಕೊಳ್ಳುತ್ತಿದೆ.

ಉದ್ಯೋಗ ರಕ್ಷಣೆ ನೀಡಲು ಈಗಾಗಲೇ ಹಲವಾರು ಕಾರ್ಮಿಕರ ಕಾನೂನುಗಳು ಜಾರಿಯಲ್ಲಿರುತ್ತವೆ. ಅವುಗಳನ್ನು ಸಂಬಂಧಪಟ್ಟ ಇಲಾಖೆಗಳು ಸಮರ್ಥನೀಯವಾಗಿ ಜಾರಿಗೆ ತರುವಲ್ಲಿ ಕಾರ್ಯನಿರತವಾಗಿವೆ. ಮೇಲಿನ ವಿಷಯಗಳಲ್ಲಿ ದೂರುಗಳು ಸ್ವೀಕೃತವಾದಲ್ಲಿ ಅವುಗಳನ್ನು ನಿವಾರಿಸಲು ಆದ್ಯತೆಯ ಮೇರೆಗೆ ಕ್ರಮ ಕೈಗೊಳ್ಳಲಾಗುತ್ತಿದೆ.

ವಾಜಪೇಯಿ ಆರೋಗ್ಯ ಶ್ರೀ ಯೋಜನೆಯ ಅನುಷ್ಠಾನ

863 (1481) ಶ್ರೀ. ಹ್ಯಾರೀಸ್ ಎನ್.ಎ (ಶಾಂತಿನಗರ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ವಾಜಪೇಯಿ ಆರೋಗ್ಯ ಶ್ರೀ ಯೋಜನೆಯ ಅನುಷ್ಠಾನದ ಕುರಿತಾದ ವಿವರಗಳೇನು;